# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** 1) ಶ್ರೀ ರಾಜೇಂದ್ರಕುಮಾರ್ ಕಡೇಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, 2) ಶ್ರೀ ಬಸವಂತಪ್ಪ.ಎಸ್.ಅಮಾತ್ಯಣ್ಣನವರ, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, 3) ಶ್ರೀ ಮಲ್ಲಪ್ಪ ದೇವಪ್ಪ ವಿಜಾಪುರ, ಗ್ರಾಮ ಪಂಚಾಯತಿ ಕಾರ್ಯದರ್ಶಿ, 4) ಶ್ರೀ ಶೇಖರಪ್ಪ ಶಿವಪ್ಪ ಪಾವಿನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು 5) ಶ್ರೀ ಸಂಗಮೇಶ ಸಜ್ಜನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ – ಅತ್ತಿಗೆರೆ ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

ನಿಬಂಧಕರು, ಎ.ಆರ್.ಎಲ್.ಓ.–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM-7986/2015/ARLO1, ದಿನಾಂಕ: 26.07.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು–1 ರವರು ದಿನಾಂಕ: 01.07.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಹಾವೇರಿ ಜಿಲ್ಲೆ ಶಿಗ್ಗಾಂವ ತಾಲ್ಲೂಕು ಅತ್ತಿಗೇರಿ ಅಂಚೆ ಕರ್ನಾಟಕ ರಕ್ಷಣಾ ವೇದಿಕೆಯ ಅಧ್ಯಕ್ಷರಾದ ಶ್ರೀ ಮಂಜುನಾಥ ಫಕೀರಪ್ಪ ನೀರಲಗಿ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಶ್ರೀ ಜಿ.ಎಂ.ಕುಬಸದ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅತ್ತಿಗೇರಿ ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಕೆಳಕಂಡ ಅಂಶಗಳ ಮೇಲೆ ಸಲ್ಲಿಸಿದ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರಡಿ ಪ್ರದತ್ತವಾದ ಅಧಿಕಾರದಡಿ ತನಿಖೆ ಕೈಗೊಳ್ಳಲಾಗಿದೆ.

> "ಎದುರುದಾರರು 2005 ರಿಂದ ಇಲ್ಲಿಯವರೆಗೆ ಬಸವ ವಸತಿ ಯೋಜನೆ, ಅಂಬೇಡ್ಕರ್ ವಸತಿ ಯೋಜನೆಗಳ ಅಡಿಯಲ್ಲಿ ಆಡಳಿತ ಮಂಡಳಿಯ ಸದಸ್ಯರ ಬಹುತೇಕ ಫಲಾನುಭವಿಗಳಾಗಿದ್ದು, ಅದರಲ್ಲಿ ಸರ್ಕಾರಿ ನೌಕರರು ಕೂಡಾ ಇದ್ದಾರೆ. ಸದರಿ ಫಲಾನುಭವಿಗಳಲ್ಲಿ ಹೆಚ್ಚು ಜನರು ಮನೆ ಕಟ್ಟಿಕೊಳ್ಳದೆ ಹಣ ಪಡೆದುಕೊಂಡಿದ್ದಾರೆ. ಪರಿಶಿಷ್ಟರಿಗೆ ಮೀಸಲಿದ್ದ ಮನೆಗಳನ್ನು ಸಾಮಾನ್ಯ ವರ್ಗಕ್ಕೆ ಸೇರಿದ ಫಲಾನುಭವಿಗಳಿಗೆ ಹಂಚಿದ್ದಾರೆ. ಸದರಿ ಫಲಾನುಭವಿಗಳನ್ನು ಗ್ರಾಮ ಸಭೆಯಲ್ಲಿ ಆಯ್ಕೆ ಮಾಡದೆ ತಮ್ಮ ಮನಸ್ಸಿಗೆ ಬಂದಂತೆ ಸದರಿ ಗ್ರಾಮ ಪಂಚಾಯತ್‌ನ ಸದಸ್ಯರು ಹಾಗೂ ಎದುರುದಾರರು ಕೂಡಿಕೊಂಡು ಫಲಾನುಭವಿಗಳಿಂದ ಹಣ ಪಡೆದುಕೊಂಡು, ಹಣ ಕೊಟ್ಟ ಫಲಾನುಭವಿಗಳನ್ನು ಆಯ್ಕೆ ಮಾಡಿದ್ದಾರೆ. 2) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಗ್ರಾಮ ಠಾಣಾ ಸರ್ಕಾರಿ ಜಾಗದಲ್ಲಿ 20 ವರ್ಷಕ್ಕಿಂತ ಹಿಂದಿನಿಂದಲೂ ವಾಸ ಮಾಡುತ್ತಾ ಬಂದಿರುವ ಬಡ ಜನರಿಂದ 1 ಮನೆಗೆ ರೂ.6,000 ರಿಂದ ರೂ.10,000 ಗಳಂತೆ ಹಣವನ್ನು ಅಕ್ರ–ಸಕ್ರಮಗೊಳಿಸುವುದಾಗಿ ಎದುರುದಾರರು ಪಡೆದುಕೊಂಡಿದ್ದಾರೆ. 3) ಎಂಜಿಎನ್‌ಆರ್‌ಇಜಿಎ ಯೋಜನೆ ಅಡಿ ಕೆಲಸ ನಿರ್ಮಿಸದೆ ಬೋಗಸ್ ಬಿಲ್ ಮಾಡಿ ಪಡೆದುಕೊಂಡಿದ್ದಾರೆ: 4) 13 ನೇ ಹಣಕಾಸು ಯೋಜನೆಯಡಿ ಅನೇಕ ಕಾಮಗಾರಿಗಳನ್ನು ಮಾಡದೆ ಬೋಗಸ್ ಬಿಲ್ ಮಾಡಿ ಲಕ್ಷಾಂತರ ಹಣವನ್ನು ಎದುರುದಾರರು ಪಡೆದುಕೊಂಡಿದ್ದಾರೆ. ಮತ್ತು 5) ನೀರು ಹಾಗೂ ವಿದ್ಯುತ್ ಸರಬರಾಜು ಮಾಡುವುದಾಗಿ ಬೋಗಸ್ ಬಿಲ್ ಮಾಡಿ ಲಕ್ಷಾಂತರ ಹಣವನ್ನು ಎದುರುದಾರರು ಪಡೆದುಕೊಂಡಿದ್ದಾರೆಂದು ಹೇಳಿದ್ದಾರೆ."

ಕಡತದ ಸಂಗತಿಗಳು, ತನಿಖಾಧಿಕಾರಿಗಳ ವರದಿ, ಎದುರುದಾರರು ಸಲ್ಲಿಸಿರುವ ಆಕ್ಷೇಪಣೆಗಳು ಹಾಗೂ ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಎದುರುದಾರರ ವಿರುದ್ಧದ ನಡವಳಿಗಳನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿ, ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಎದುರುದಾರರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಆಗಿದ್ದ ಶ್ರೀ ಕೆ.ಬಿ.ಚರಂತಿಮಠ ಇವರು ದಿನಾಂಕ 09.03.2016 ಮತ್ತು 11.11.2015 ರಂದು ಕ್ರಮವಾಗಿ ನಿಧನ ಹೊಂದಿರುವುದರಿಂದ, ಹಾಗೂ 2010 ರಿಂದ 2015 ರ ಅವಧಿಯಲ್ಲಿ ಕಾರ್ಯನಿರ್ವಹಿಸಿದ ಅಧ್ಯಕ್ಷರುಗಳ ಅವಧಿ ಮುಕ್ತಾಯಗೊಂಡಿರುವುದರಿಂದ, ಇವರುಗಳ ವಿರುದ್ಧದ ನಡವಳಿಗಳನ್ನು ಕೈಬಿಟ್ಟಿದ್ದು, ಉಳಿದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ 1) ಶ್ರೀ ರಾಜೇಂದ್ರಕುಮಾರ್ ಕಡೇಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, 2) ಶ್ರೀ ಬಸವಂತಪ್ಪ.ಎಸ್.ಅಮಾತ್ಯಣ್ಣನವರ (ನಿವೃತ್ತ) ಪಂಚಾಯತಿ ಅಭಿವೃದ್ಧಿ ಅಧಿಕಾರಿ, 3) ಶ್ರೀ ಮಲ್ಲಪ್ಪ ದೇವಪ್ಪ ವಿಜಾಪುರ, ಗ್ರಾಮ ಪಂಚಾಯತಿ ಕಾರ್ಯದರ್ಶಿ, 4) ಶ್ರೀ ಶೇಖರಪ್ಪ ಶಿವಪ್ಪ ಪಾವಿನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು 5) ಶ್ರೀ ಸಂಗಮೇಶ ಸಜ್ಜನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ – ಅತ್ತಿಗೆರೆ ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳನ್ನು 1 ರಿಂದ 5 ನೇ ಎದುರುದಾರರುಗಳನ್ನಾಗಿ ಮುಖಪುಟದಲ್ಲಿ ಸೇರಿಸಲಾಗಿದ್ದು, ಇವರುಗಳು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1) ಅಡಿಯಲ್ಲಿ ದುರ್ನಡತೆ / ದುರ್ವರ್ತನೆ ಕಂಡುಬರುವುದರಿಂದ, 2 ನೇ ಎದುರುದಾರರು ದಿನಾಂಕ 30.09.2014 ರಂದು ನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ಕೆ.ಸಿ.ಎಸ್.ಆರ್. ನಿಯಮ 214(2)(ಬಿ)(i) ಅಡಿ ಇಲಾಖಾ ವಿಚಾರಣೆ ನಡೆಸಲು ಅನುಮತಿಯನ್ನು ನೀಡಿ, ಎದುರುದಾರರುಗಳ ವಿರುದ್ಧ ಕೆಸಿಎಸ್ಆರ್(ಸಿಸಿಎ) ನಿಯಮ 14ಎ ರಡಿ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಸಂಸ್ಥೆಗೆ ವಹಿಸಬೇಕೆಂದು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಈ ಪ್ರಕರಣದಲ್ಲಿ ಭಾಗಿಯಾಗಿರುವ 2) ಶ್ರೀ ಬಸವಂತಪ್ಪ.ಎಸ್.ಅಮಾತ್ಯಣ್ಣನವರ (ನಿವೃತ್ತ) ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರು ಸೇವೆಯಿಂದ ದಿನಾಂಕ 30.09.2014 ರಂದು ನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ಕೆ.ಸಿ.ಎಸ್.ಆರ್. ನಿಯಮ 214(2)(ಬಿ)(i) ಅಡಿ ಇಲಾಖಾ ವಿಚಾರಣೆ ನಡೆಸಲು ಅನುಮತಿಯನ್ನು ನೀಡಿ, 1) ಶ್ರೀ ರಾಜೇಂದ್ರಕುಮಾರ್ ಕಡೇಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, 2) ಶ್ರೀ ಬಸವಂತಪ್ಪ.ಎಸ್.ಅಮಾತ್ಯಣ್ಣನವರ (ನಿವೃತ್ತ) ಪಂಚಾಯತಿ ಅಭಿವೃದ್ಧಿ ಅಧಿಕಾರಿ, 3) ಶ್ರೀ ಮಲ್ಲಪ್ಪ ದೇವಪ್ಪ ವಿಜಾಪುರ, ಗ್ರಾಮ ಪಂಚಾಯತಿ ಕಾರ್ಯದರ್ಶಿ, 4) ಶ್ರೀ ಶೇಖರಪ್ಪ ಶಿವಪ್ಪ ಪಾವಿನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು 5) ಶ್ರೀ ಸಂಗಮೇಶ ಸಜ್ಜನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ – ಅತ್ತಿಗೆರೆ ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 635 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 09.08.2017</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, 2) ಶ್ರೀ ಬಸವಂತಪ್ಪ.ಎಸ್.ಅಮಾತ್ಯಣ್ಣನವರ (ನಿವೃತ್ತ) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅತ್ತಿಗೆರೆ ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರು ನಿವೃತ್ತರಾಗಿರುವುದರಿಂದ ಇವರ ಇಲಾಖಾ ವಿಚಾರಣೆ ನಡೆಸಲು ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ)(1) ರಡಿ ಅನುಮತಿ ನೀಡಿ, 1) ಶ್ರೀ ರಾಜೇಂದ್ರಕುಮಾರ್ ಕಡೇಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, (ಪ್ರಸ್ತುತ ಶಿಶುವಿನಹಾಳ ಗ್ರಾಮ ಪಂಚಾಯತಿ) 2) ಶ್ರೀ ಬಸವಂತಪ್ಪ.ಎಸ್.ಅಮಾತ್ಯಣ್ಣನವರ (ನಿವೃತ್ತ) ಪಂಚಾಯತಿ ಅಭಿವೃದ್ಧಿ ಅಧಿಕಾರಿ, 3) ಶ್ರೀ ಮಲ್ಲಪ್ಪ ದೇವಪ್ಪ ವಿಜಾಪುರ, ಗ್ರಾಮ ಪಂಚಾಯತಿ ಕಾರ್ಯದರ್ಶಿ, 4) ಶ್ರೀ ಶೇಖರಪ್ಪ ಶಿವಪ್ಪ ಪಾವಿನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ (ಪ್ರಸ್ತುತ ಹನುಮಾರಹಳ್ಳಿ ಗ್ರಾಮ ಪಂಚಾಯತಿ) ಮತ್ತು 5) ಶ್ರೀ ಸಂಗಮೇಶ ಸಜ್ಜನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ – ಅತ್ತಿಗೆರೆ ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಹಾಗೂ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ರ ಅಡಿ ಅಥವಾ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214 ರಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ-1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   **(ಮೇಲೆ ಓದಲಾದ ಪತ್ರದೊಂದಿಗೆ ಸಲ್ಲಿಸಲಾಗಿದ್ದ ಮೂಲ ಲಗತ್ತುಗಳು ಹಾಗೂ ಉಪಲೋಕಾಯುಕ್ತ ವರದಿಯನ್ನು ಪುಟ ಸಂಖ್ಯೆ 01 ರಿಂದ 488 ರವರೆಗೆ ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ.)**
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
5) ಕಾರ್ಯನಿರ್ವಾಹಕ ಅಧಿಕಾರಿ, ಶಿಗ್ಗಾಂವ ತಾಲ್ಲೂಕು ಪಂಚಾಯತಿ, ಶಿಗ್ಗಾಂವ, ಹಾವೇರಿ ಜಿಲ್ಲೆ.
   (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) 1) ಶ್ರೀ ರಾಜೇಂದ್ರಕುಮಾರ್ ಕಡೇಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, (ಪ್ರಸ್ತುತ ಶಿಶುವಿನಹಾಳ ಗ್ರಾಮ ಪಂಚಾಯತಿ) 2) ಶ್ರೀ ಬಸವಂತಪ್ಪ.ಎಸ್.ಅಮಾತ್ಯಣ್ಣನವರ (ನಿವೃತ್ತ) ಪಂಚಾಯತಿ ಅಭಿವೃದ್ಧಿ ಅಧಿಕಾರಿ, 3) ಶ್ರೀ ಮಲ್ಲಪ್ಪ ದೇವಪ್ಪ ವಿಜಾಪುರ, ಗ್ರಾಮ ಪಂಚಾಯತಿ ಕಾರ್ಯದರ್ಶಿ, 4) ಶ್ರೀ ಶೇಖರಪ್ಪ ಶಿವಪ್ಪ ಪಾವಿನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ (ಪ್ರಸ್ತುತ ಹನುಮಾರಹಳ್ಳಿ ಗ್ರಾಮ ಪಂಚಾಯತಿ) ಮತ್ತು 5) ಶ್ರೀ ಸಂಗಮೇಶ ಸಜ್ಜನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ - ಅತ್ತಿಗೆರೆ ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ.
7) ಗಣಕಕೋಶ - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.